ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಹೆಚ್.ವಿ.ರಾಘವೇಂದ್ರ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬೀಡಿ ಗ್ರಾಮ ಪಂಚಾಯತ್, ಖಾನಾಪುರ ತಾಲ್ಲೂಕು, ಬೆಳಗಾವಿ ಜಿಲ್ಲೆ ಹಾಲಿ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ತಾಲ್ಲೂಕು ಪಂಚಾಯತ್, ಹೊನ್ನಾಳಿ, ದಾವಣಗೆರೆ ಜಿಲ್ಲೆ ಇವರ ವಿರುದ್ಧ ಶಿಸ್ತು ಕ್ರಮ - ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ-1 ರವರಿಗೆ ವಹಿಸುವ ಬಗ್ಗೆ - ಆದೇಶ.

ಓದಲಾಗಿದೆ:-

1) ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ: Compt / Uplok/ BGM-375 & 398/2012/ ARE-5 ದಿನಾಂಕ 05.10.2016.

2) ಮಾನ್ಯ ಉಪ ಲೋಕಾಯುಕ್ತರು - 1 ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ವರದಿ ಸಂಖ್ಯೆ Compt / Uplok/BGM-375 & 398/2012/ ARE-5 ದಿನಾಂಕ. 03.10.2016.

---

ಪ್ರಸ್ತಾವನೆ

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 05.10.2016ರ ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತ-1 ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತ -1 ರವರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತ-1 ರವರು ಲೋಕಾಯುಕ್ತ ಕಾಯ್ದೆ ಕಲಂ 12 (3)ರಂತೆ ಸಲ್ಲಿಸಿರುವ ವರದಿ ಹಾಗೂ ಲಗತ್ತಿಸಿರುವ ದಾಖಲೆಗಳನ್ನು ಪರಿಶೀಲಿಸಿದೆ. ಶ್ರೀ ಗೋಪಾಲ್ ಹನುಮಂತಪ್ಪ ಬಾಬುಶೇಟ್ ಮತ್ತು ಶ್ರೀ ಈರಪ್ಪ ಬಸವಣಪ್ಪಾ ಪಾಟೀಲ್ ಸಾ: ಬೀಡಿ, ತಾ:ಖಾನಾಪುರ ಜಿಲ್ಲಾ ಬೆಳಗಾವಿ ಇವರುಗಳು ಬೆಳಗಾವಿ ಜಿಲ್ಲೆ, ಖಾನಾಪುರ ತಾಲ್ಲೂಕು ಬೀಡಿ ಗ್ರಾಮ ಪಂಚಾಯತಿಯ ಅಧ್ಯಕ್ಷರಾದ ಶ್ರೀಮತಿ ಶಾಂತ ಬಾಬು ಸುಣಗಾರ ಮತ್ತು ಶ್ರೀ ಹೆಚ್.ವಿ.ರಾಘವೇಂದ್ರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಇವರುಗಳು ಗ್ರಾಮ ಪಂಚಾಯತಿಯ ಸದಸ್ಯರಿಗೆ ತಿಳಿಸದೆಯೇ ಒಂದೇ ದಿನದಲ್ಲಿ 40 ಚೆಕ್‌ಗಳನ್ನು ಗುತ್ತಿಗೆದಾರರಿಗೆ ನೀಡಿದ್ದಾರೆಂದು, 2009-10 ಮತ್ತು 2010-11 ಸಾಲಿನಲ್ಲಿ ಕೂಲಿಕಾರರಿಗೆ ಕೆಲಸಗಳನ್ನು ನೀಡದೆ, ಗುತ್ತಿಗೆದಾರರಿಗೆ ಕೆಲಸವನ್ನು ವಹಿಸಿದ್ದಾರೆಂದು ಹಾಗೂ ಅಪೂರ್ಣವಾಗಿರುವ 9 ಕಾಮಗಾರಿಗಳ ಬಗ್ಗೆ ಯಾವುದೇ ಕ್ರಮ ಕೈಗೊಂಡಿಲ್ಲವೆಂದು ಕರ್ನಾಟಕ ಲೋಕಾಯುಕ್ತ ಕಚೇರಿಯಲ್ಲಿ ದೂರನ್ನು ಸಲ್ಲಿಸಿರುತ್ತಾರೆ.

ಸದರಿ ದೂರಿಗೆ ಸಂಬಂಧಿಸಿದ್ದಂತೆ ಲೋಕಾಯುಕ್ತ ಕಚೇರಿಯು ಇಬ್ಬರು ಆಪಾದಿತರಿಂದ ಆಕ್ಷೇಪಣೆಗಳನ್ನು ಪಡೆದುಕೊಂಡಿದ್ದು, ಆಪಾದಿತರು ತಮ್ಮ ವಿರುದ್ಧ ಮಾಡಿರುವ ಆರೋಪಗಳನ್ನು ಅಲ್ಲಗಳೆದಿದ್ದಾರೆಂದು ತಿಳಿಸಿರುತ್ತಾರೆ.

ಲೋಕಾಯುಕ್ತ ಕಚೇರಿಯು ಸದರಿ ದೂರಿಗೆ ಸಂಬಂಧಿಸಿದಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಳಗಾವಿ ಮತ್ತು ಪೋಲೀಸ್ ಇನ್ಸ್‌ಪೆಕ್ಟರ್, ಲೋಕಾಯುಕ್ತ, ಬೆಳಗಾವಿ ಇವರುಗಳಿಂದ ಮಾಹಿತಿಯನ್ನು ಹಾಗೂ ಆಪಾದಿತರ ವಿರುದ್ಧ ನ್ಯಾಯಾಲಯದಲ್ಲಿ ದಾಖಲಾಗಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಕೈಗೊಂಡಿರುವ ತನಿಖೆಗೆ ಸಂಬಂಧಿಸಿದ ದಾಖಲೆಗಳನ್ನು ಪಡೆದುಕೊಂಡು ಪರಿಶೀಲಿಸಿದ್ದು, ಈ ಕೆಳಕಂಡ ನ್ಯೂನ್ಯತೆಗಳು ಕಂಡುಬರುತ್ತದೆ ಎಂದು ತಿಳಿಸಿರುತ್ತಾರೆ:-

(1) ದೂರುದಾರರು ಆರೋಪಿಸಿರುವ 9 ಕಾಮಗಾರಿಗಳು ಪೂರ್ಣಗೊಂಡಿರುವ ಬಗ್ಗೆ ಆಪಾದಿತರು ಯಾವುದೇ ದಾಖಲೆಗಳನ್ನು ಸಲ್ಲಿಸಿರುವುದಿಲ್ಲ.

(2) ಆಪಾದಿತರು ಗುತ್ತಿಗೆದಾರರಿಗೆ ಯಾವ ಯಾವ ಕಾಮಗಾರಿಗಳಿಗೆ ಸಂಬಂಧಿಸಿದಂತೆ 40 ಚೆಕ್‌ಗಳನ್ನು ಒಂದೇ ದಿನದಲ್ಲಿ ನೀಡಿದ್ದಾರೆಂಬ ಬಗ್ಗೆ ಯಾವುದೇ ವಿವರಣೆಯನ್ನು ನೀಡಿರುವುದಿಲ್ಲ.

(3) 3ನೇ ಪಾರ್ಟಿ ಇನ್ಸ್‌ಪೆಕ್ಷನ್ ತಂಡವು ಬೀಡಿ ಗ್ರಾಮ ಪಂಚಾಯತಿಯಿಂದ ಕೈಗೊಳ್ಳಲಾದ ಸಣ್ಣ ನೀರಾವರಿ ಕೆರೆಯ ದುರಸ್ತಿ ಕಾಮಗಾರಿಯ ಪರಿಶೀಲನೆ ನಡೆಸಿ ನೀಡಿರುವ ತನಿಖಾ ವರದಿಯಲ್ಲಿ ಸದರಿ ಕಾಮಗಾರಿಯನ್ನು ಮಾಡಿರುವುದಿಲ್ಲವೆಂದು, ಆದರೆ ರೂ. 4,98,315/-ಗಳು ಖರ್ಚು ಮಾಡಿರುವುದಾಗಿ ಖೊಟ್ಟಿ ದಾಖಲೆಗಳನ್ನು ಸೃಷ್ಟಿಸಿ ಬಿಲ್ಲು ಪಾವತಿಸಲಾಗಿರುತ್ತದೆ.

ಮಾನ್ಯ ಉಪ ಲೋಕಾಯುಕ್ತ-1 ರವರು ತನಿಖೆ ನಡೆಸಿದಾಗ ಪಡೆದುಕೊಂಡಿರುವ ದಾಖಲೆಗಳನ್ನು ಮತ್ತು 3ನೇ ಪಾರ್ಟಿ ಇನ್ಸ್‌ಪೆಕ್ಷನ್ ವರದಿಯನ್ನು ಹಾಗೂ ಆಪಾದಿತರು ಸಲ್ಲಿಸಿರುವ ಆಕ್ಷೇಪಣೆಗಳನ್ನು ಪರಿಶೀಲಿಸಿದ್ದು, ಪ್ರಕರಣದಲ್ಲಿ ಭಾಗಿಯಾಗಿರುವ ಇಬ್ಬರು ಆಪಾದಿತರು ಪ್ರಶ್ನಿತ ದುರಸ್ತಿ ಕಾಮಗಾರಿಯನ್ನು ಅನುಷ್ಠಾನಗೊಳಿಸದೇ, ಕಾಮಗಾರಿ ಅನುಷ್ಠಾನಗೊಳಿಸಿರುವಂತೆ ಖೊಟ್ಟಿ ದಾಖಲೆಗಳನ್ನು ಸೃಷ್ಟಿಸಿ ರೂ. 4,98,315/- ಬಿಲ್ಲು ಪಾವತಿಸಿ ಸರ್ಕಾರದ ಹಣ ದುರುಪಯೋಗಪಡಿಸಿಕೊಂಡಿರುವುದು ಕಂಡುಬರುತ್ತದೆಯೆಂದು, ಆಪಾದಿತರುಗಳ ವಿರುದ್ಧದ ನಡವಳಿಕೆಯನ್ನು ಕೈ ಬಿಡಲು ಸೂಕ್ತ / ಸಮಂಜಸ / ಸಮಾಧಾನಕರ ಅಂಶಗಳು ಕಂಡುಬರುತ್ತಿಲ್ಲವೆಂದು, ಹಾಗಾಗಿ ಸದರಿಯವರುಗಳು ಸಾರ್ವಜನಿಕ / ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1) ನ್ನು ಉಲ್ಲಂಘಿಸಿ ಕರ್ತವ್ಯ ಲೋಪ / ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ, ಶ್ರೀಮತಿ ಶಾಂತ ಬಾಬು ಸುಣಗಾರ, ಅಧ್ಯಕ್ಷರು, ಬೀಡಿ ಗ್ರಾಮ ಪಂಚಾಯತಿ, ಖಾನಾಪುರ ತಾಲ್ಲೂಕು ಬೆಳಗಾವಿ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಕಾಯ್ದೆಯಡಿ ಕ್ರಮ ಕೈಗೊಳ್ಳುವಂತೆ ಹಾಗೂ ಶ್ರೀ ಹೆಚ್.ವಿ.ರಾಘವೇಂದ್ರ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬೀಡಿ ಗ್ರಾಮ ಪಂಚಾಯತ್, ಖಾನಾಪುರ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವ ಸಲುವಾಗಿ ಪ್ರಕರಣವನ್ನು ತಮಗೆ ವಹಿಸುವಂತೆ ಮಾನ್ಯ ಉಪ ಲೋಕಾಯುಕ್ತ-1ರವರು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದಂತೆ ಎಲ್ಲಾ ಮಾಹಿತಿ ಹಾಗೂ ದಾಖಲೆಗಳನ್ನು ಪರಿಶೀಲಿಸಿರುತ್ತದೆ. ಪ್ರಕರಣದಲ್ಲಿ ಭಾಗಿಯಾಗಿರುವ ಇಬ್ಬರು ಆಪಾದಿತರು ಪ್ರಶ್ನಿತ ದುರಸ್ತಿ ಕಾಮಗಾರಿಯನ್ನು ಅನುಷ್ಠಾನಗೊಳಿಸದೇ, ಕಾಮಗಾರಿ ಅನುಷ್ಠಾನಗೊಳಿಸಿರುವಂತೆ ಖೊಟ್ಟಿ ದಾಖಲೆಗಳನ್ನು ಸೃಷ್ಟಿಸಿ ರೂ. 4,98,315/-ಗಳ ಬಿಲ್ಲು ಪಾವತಿಸಿ ಸರ್ಕಾರದ ಹಣ ದುರುಪಯೋಗಪಡಿಸಿಕೊಂಡಿರುವುದು ದಾಖಲೆಗಳಿಂದ ಕಂಡುಬರುತ್ತದೆ. ಆದ್ದರಿಂದ ಸದರಿ ಇಬ್ಬರು ಆಪಾದಿತರು ಸಾರ್ವಜನಿಕ / ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1) ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿ ಹಣದುರುಪಯೋಗ ಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಸದರಿಯವರುಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವುದು ಅವಶ್ಯವೆಂದು ಕಂಡುಬರುತ್ತದೆ.

ಆದ್ದರಿಂದ, ಪ್ರಕರಣದಲ್ಲಿ ಭಾಗಿಯಾಗಿರುವ ಶ್ರೀಮತಿ ಶಾಂತ ಬಾಬು ಸುಣಗಾರ, ಅಧ್ಯಕ್ಷರು, ಬೀಡಿ ಗ್ರಾಮ ಪಂಚಾಯತಿ, ಖಾನಾಪುರ ತಾಲ್ಲೂಕು ಬೆಳಗಾವಿ ಜಿಲ್ಲೆ ಇವರು ಎಸಗಿರುವ ಅವ್ಯವಹಾರಗಳ ಬಗ್ಗೆ ಕರ್ನಾಟಕ ಪಂಚಾಯತ್ ರಾಜ್ ಕಾಯ್ದೆಯಡಿ ಅಗತ್ಯ ಕ್ರಮವಹಿಸಲು ಹಾಗೂ ಮತ್ತೊಬ್ಬ ಆಪಾದಿತ ನೌಕರರಾದ ಶ್ರೀ ಹೆಚ್.ವಿ.ರಾಘವೇಂದ್ರ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬೀಡಿ ಗ್ರಾಮ ಪಂಚಾಯತ್, ಖಾನಾಪುರ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ನಡೆಸಲು ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ-1 ರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

<u>ಆದೇಶ ಸಂಖ್ಯೆ : ಗ್ರಾಅಪ 309 ಕೆಎಸ್ಎಸ್ 2016</u>
<u>ಬೆಂಗಳೂರು, ದಿನಾಂಕ: 03.03.2017</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಹೆಚ್.ವಿ.ರಾಘವೇಂದ್ರ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬೀಡಿ ಗ್ರಾಮ ಪಂಚಾಯತ್, ಖಾನಾಪುರ ತಾಲ್ಲೂಕು, ಬೆಳಗಾವಿ ಜಿಲ್ಲೆ ಹಾಲಿ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ), ತಾಲ್ಲೂಕು ಪಂಚಾಯತ್, ಹೊನ್ನಾಳಿ, ದಾವಣಗೆರೆ ಜಿಲ್ಲೆ ಇವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನಿ) ನಿಯಮಾವಳಿಗಳು 1957ರ ನಿಯಮ 11 ರಂತೆ ನಡೆಸಲು ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ) ರ ಅನುಸಾರ ಮಾನ್ಯ ಉಪಲೋಕಾಯುಕ್ತ -1 ರವರಿಗೆ ವಹಿಸಿ ಆದೇಶಿಸಿದೆ.

ಪ್ರಕರಣದಲ್ಲಿ ಭಾಗಿಯಾಗಿರುವ ಮತ್ತೊಬ್ಬ ಆಪಾದಿತರಾದ ಶ್ರೀಮತಿ ಶಾಂತ ಬಾಬು ಸುಣಗಾರ, ಅಧ್ಯಕ್ಷರು, ಬೀಡಿ ಗ್ರಾಮ ಪಂಚಾಯತಿ, ಖಾನಾಪುರ ತಾಲ್ಲೂಕು ಬೆಳಗಾವಿ ಜಿಲ್ಲೆ ಇವರು ಎಸಗಿರುವ ಅವ್ಯವಹಾರಗಳ ಬಗ್ಗೆ ಕರ್ನಾಟಕ ಪಂಚಾಯತ್ ರಾಜ್ ಕಾಯ್ದೆಯಡಿ ಅಗತ್ಯ ಕ್ರಮವಹಿಸಲು ಸಕ್ಷಮ ಪ್ರಾಧಿಕಾರವಾದ ನಿರ್ದೇಶಕರು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ತಿಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್.ರಂಗನಗೌಡ) 03/03/2017
ಸರ್ಕಾರದ ಅಧೀನ ಕಾರ್ಯದರ್ಶಿ
(ಸೇವೆಗಳು ಬಿ & ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಇವರಿಗೆ:</u>

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು-1, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಳಗಾಂ / ದಾವಣಗೆರೆ.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಶ್ರೀ ಹೆಚ್.ವಿ. ರಾಘವೇಂದ್ರ, ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ), ಹೊನ್ನಾಳಿ ತಾಲ್ಲೂಕು ಪಂಚಾಯತ್, ದಾವಣಗೆರೆ ಇವರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ ಇವರ ಮುಖಾಂತರ

6. ಉಪ ನಿರ್ದೇಶಕರು ಹಾಗೂ ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
7. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
8. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
9. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಸೂಚನಾ ಫಲಕ : ಗಣಕ ಕೋಶ